ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 16-03-2021　　　　ಪ್ರಶ್ನೆ ಸಂಖ್ಯೆ : 1091 (1394)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 16-03-2021

ಉತ್ತರಿಸುವ ಸಚಿವರು: ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು

ವಿಷಯ : ಬಿ.ಪಿ.ಎಲ್. ಕಾರ್ಡ್‌ಗಳ ಹಂಚಿಕೆ

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಇದುವರೆಗೂ ಎಷ್ಟು ಬಿ.ಪಿ.ಎಲ್. ಕಾರ್ಡ್‌ಗಳನ್ನು ಹಂಚಲಾಗಿದೆ; ಇನ್ನೂ ಎಷ್ಟು ಜನರಿಗೆ ಹಂಚಬೇಕಾಗಿದೆ;

(ಆ) ಅನರ್ಹರಿಗೆ ಕೊಟ್ಟಿರುವ ಎಷ್ಟು ಕಾರ್ಡ್‌ಗಳನ್ನು ವಾಪಸ್ ಪಡೆಯಲಾಗಿದೆ; ಅರ್ಹರಲ್ಲದಿದ್ದರೂ ಪರಿಶೀಲಿಸದೆ ಹಂಚಿಕೆ ಮಾಡಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಬಿ.ಪಿ.ಎಲ್. ಕಾರ್ಡ್ ಹಂಚಲು ಹೊಸ ಮಾನದಂಡಗಳನ್ನು ನಿಗಧಿಪಡಿಸಲು ಸರ್ಕಾರ ಚಿಂತಿಸಿದೆಯೇ; ಚಿಂತಿಸಿದ್ದಲ್ಲಿ ಮಾಹಿತಿ ನೀಡುವುದು ?